16-12-24
(37)

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ(ಶಿಕ್ಷಕರ ಕ್ಷೇತ್ರ), ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

ಪ್ರಶ್ನೆ:

ಬೆಳಗಾವಿಯ ಸುವರ್ಣ ವಿಧಾನಸೌಧದ ಮುಂಭಾಗದಲ್ಲಿ 1995 ರ ನಂತರ ಪ್ರಾರಂಭವಾದ ಖಾಸಗಿ ಕನ್ನಡ ಮಾಧ್ಯಮ ಶಾಲೆ, ಕಾಲೇಜುಗಳ ಶಿಕ್ಷಕರು ಉಪನ್ಯಾಸಕರು ಅನುದಾನಕ್ಕೆ ಒಳಪಡಿಸಬೇಕೆಂದು ಹೋರಾಟ ಮಾಡುತ್ತಿರುವುದು ಎಲ್ಲ ಪತ್ರಿಕೆಗಳಲ್ಲಿ ವರದಿಯಾಗಿದೆ. ಹುಟ್ಟಿದ ಪ್ರತಿಯೊಂದು ಮಗುವಿಗೂ ಮಾತೃಭಾಷೆಯಲ್ಲಿ ಶಿಕ್ಷಣ ಕೊಡಬೇಕಾಗಿರುವುದು ಪ್ರತಿಯೊಂದು ಸರ್ಕಾರಗಳ ಜವಬ್ದಾರಿಯಾಗಿದೆ. ಆದರೆ ಸರ್ಕಾರವೇ ಎಲ್ಲಾ ಭಾಗದಲ್ಲಿ ಶಾಲೆಗಳನ್ನು ಪ್ರಾರಂಭಿಸಲು ಸಾದ್ಯವಾಗದ ಕಾರಣ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ತೆರೆದು ಶಿಕ್ಷಣ ನೀಡುತ್ತಾ ಬಂದು ಸರ್ಕಾರದ ಅರ್ಧ ಕೆಲಸವನ್ನು ಕಡಿಮೆ ಮಾಡಿವೆ. ಶಿಕ್ಷಣ ನೀಡುವ ಎಲ್ಲಾ ಸಂಸ್ಥೆಗಳಿಗೆ ಅನುದಾನ ನೀಡಬೇಕಾಗಿರುವುದು ಸರ್ಕಾರದ ಕರ್ತವ್ಯವಾಗಿದೆ ಆದರೆ ಈ ವಿಚಾರದಲ್ಲಿ ಕರ್ನಾಟಕ ಸರ್ಕಾರಗಳು ಮಲತಾಯಿ ಧೋರಣೆ ತೋರಿರುವುದು ನೋವಿನ ಸಂಗತಿಯಾಗಿದೆ.

ಕರ್ನಾಟಕದಲ್ಲಿ ಸ್ವಾತಂತ್ರ ಪೂರ್ವದಿಂದಲೂ ಮತ್ತು ಸ್ವಾತಂತ್ರ ನಂತರವೂ ಸರ್ಕಾರದ ವತಿಯಿಂದ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಅನುದಾನವನ್ನು ನೀಡಲಾಗುತ್ತಿತ್ತು ನಂತರ ಈ ಪ್ರಕ್ರಿಯೆ 1986ಕ್ಕೆ ನಿಂತುಹೋಗಿತ್ತು. ನಂತರ 2006ರಲ್ಲಿ ಸರ್ಕಾರವು 1987 ರಿಂದ 1995 ರವರೆಗೆ ಅನುದಾನ ನೀಡಿತ್ತು. ನಂತರದಲ್ಲಿ ಈ ಈ ಹಿಂದಿನ ಸರ್ಕಾರದಲ್ಲಿ 1995 ರ ನಂತರ ಪ್ರಾರಂಭವಾದ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಪ್ರಸ್ತಾವನೆಯು ಸಿದ್ಧಗೊಂಡು ಹಂತ ಹಂತವಾಗಿ ಅನುದಾನಕ್ಕೆ ಒಳಪಡಿಸಲು ಕ್ರಮ ಕೈಗೊಳ್ಳಲಾಗಿತ್ತು. ಆದರೆ ಅದು ಆದೇಶದ ರೂಪದಲ್ಲಿ ಆಗಲಿಲ್ಲ. ಆದಕಾರಣ ಈಗಾಗಲೇ ಕಳೆದು ಒಂದು ವಾರದಿಂದ ಹೋರಾಟದಲ್ಲಿ ಪಾಲ್ಗೊಂಡಿರುವ ಅನುದಾನ ರಹಿತ ಕನ್ನಡ ಮಾಧ್ಯಮ ಶಾಲಾ-ಕಾಲೇಜುಗಳ ಶಿಕ್ಷಕರ ಉಪನ್ಯಾಸಕರುಗಳ ಜೀವನ ನಿರ್ವಹಣೆಗೆ ಅನುಕೂಲವಾಗುವಂತೆ 1995 ರ ನಂತರ ಪ್ರಾರಂಭವಾಗಿರುವ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವಂತೆ ಈ ಮೂಲಕ ಸರ್ಕಾರವನ್ನು ಆಗ್ರಹಿಸುತ್ತೇನೆ.

ಉತ್ತರ:

ರಾಜ್ಯದಲ್ಲಿ ಪ್ರಸ್ತುತ ಖಾಸಗಿ ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳನ್ನು ದಿ:01-07-1995ರವರೆಗೆ ವೇತನಾನುದಾನಕ್ಕೆ ಒಳಪಡಿಸಲು ಸರ್ಕಾರವು ಅನುಮತಿ ನೀಡಿದೆ. ಅದರಂತೆ ಸದರಿ ಅವಧಿಯಲ್ಲಿ ಪ್ರಾರಂಭಿಸಲಾದ ಅನುದಾನರಹಿತ ಪ್ರಾಥಮಿಕ / ಪ್ರೌಢಶಾಲೆಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲಾಗುತ್ತಿದೆ.

1995ರ ನಂತರದ ಅವಧಿಯಲ್ಲಿ ಅನುದಾನರಹಿತವಾಗಿ ಪ್ರಾರಂಭಿಸಿರುವ ಕನ್ನಡ ಮಾಧ್ಯಮದ ಶಾಲಾ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸುವ ಕುರಿತಂತೆ ಸರ್ಕಾರದ ಮುಂದೆ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

**ಸಂಖ್ಯೆ:** ಇಪಿ 426 ಪಿಜಿಸಿ 2024.

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು